# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

**ಟಮಕ, ಕೋಲಾರ-563 103**

ಸಂಖ್ಯೆ: ಬೆಂ.ಉ.ವಿ/ಅಭಿಪ್ರಾಯ ಸಂಗ್ರಹಣೆ/೧೪೦/2020-21 ದಿನಾಂಕ: 08.06.2020

**ವಿಷಯ: ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ 2020-21 ವರ್ಷದ ವಿವಿಧ ಪದವಿ (ಎರಡು, ನಾಲ್ಕು ಮತ್ತು ಆರನೇ ಸೆಮಿಸ್ಟರ್) ಕೋರ್ಸುಗಳಗೆ ಸಂಬಂಧಿಸಿದಂತೆ ಪರೀಕ್ಷೆಗಳನ್ನು ನಡೆಸುವುದು ಹಾಗೂ 2020-21ನೇ ಶೈಕ್ಷಣಿಕ ವರ್ಷಕ್ಕೆ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಅಭಿಪ್ರಾಯ ಸಂಗ್ರಹಿಸಿ ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವ ಬಗ್ಗೆ.**

**ಉಲ್ಲೇಖ: 1. ಸಂ. ಇಡಿ ದಿನಾಂಕ: 05.06.2020.**

**2. ಮಾನ್ಯ ಕುಲಪತಿಗಳ ಆದೇಶ ದಿನಾಂಕ 08.06.2020.**

* * *

ಮೇಲಿನ ವಿಷಯ ಮತ್ತು ಉಲ್ಲೇಖ(1)ಕ್ಕೆ ಸಂಬಂಧಿಸಿದಂತೆ, ದಿನಾಂಕ 5.6.2020ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರ ಕಛೇರಿಯ ಸುತ್ತೋಲೆಯನ್ನು ಈ ಪತ್ರದ ಜೊತೆ ಲಗತ್ತಿಸಿದೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಸಂಯೋಜಿತ ಕಾಲೇಜು ಪ್ರಾಂಶುಪಾಲರು 2019-20ನೇ ಶೈಕ್ಷಣಿಕ ವರ್ಷದ ವಿವಿಧ ಪದವಿ (ಎರಡು, ನಾಲ್ಕು ಮತ್ತು ಆರನೇ ಸೆಮಿಸ್ಟರ್) ಕೋರ್ಸುಗಳ ಪರೀಕ್ಷೆಗಳನ್ನು ನಡೆಸುವುದರ ಬಗ್ಗೆ (ಮೌಲ್ಯಮಾಪನವೂ ಸೇರಿದಂತೆ) ಹಾಗೂ (2)ಮುಂದಿನ ಶೈಕ್ಷಣಿಕ ವರ್ಷಕ್ಕೆ (2020-21) ಕಾಲೇಜುಗಳನ್ನು ಪುನರಾರಂಭಿಸುವ ಸಂಬಂಧ ತಮ್ಮ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಪೋಷಕರ ಅಭಿಪ್ರಾಯ, ಜೊತೆಗೆ ತಮ್ಮ ಕಾಲೇಜಿನ ಅಧ್ಯಾಪಕರುಗಳ ಅಭಿಪ್ರಾಯಗಳನ್ನು ಸಂಗ್ರಹಿಸಿ ತಮ್ಮ ಸ್ಪಷ್ಟ ವೈಯಕ್ತಿಕ ಅಭಿಪ್ರಾಯದೊಂದಿಗೆ **ದಿನಾಂಕ 25.06.2020ರ** ಒಳಗೆ ವಿಶ್ವವಿದ್ಯಾಲಯಕ್ಕೆ ತಪ್ಪದೆ ಸಲ್ಲಿಸುವುದು.

ಇತ್ತೀಚಿನ ಬೆಳವಣಿಗೆಗಳಲ್ಲಿ, ಸರ್ಕಾರವು ವಿವಿಧ ಪದವಿ ಕೋರ್ಸುಗಳಿಗೆ ಪರೀಕ್ಷೆಗಳನ್ನು ನಡೆಸುವುದು ಮತ್ತು ಮುಂದಿನ ಶೈಕ್ಷಣಿಕ ವರ್ಷದಲ್ಲಿ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಸೂಕ್ತ ವೇಳಾಪಟ್ಟಿಯ ಪ್ರಕಟಣೆಗೆ ತೀರ್ಮಾನ ಕೈಗೊಳ್ಳಬೇಕಾಗಿರುವ ಹಿನ್ನಲೆಯಲ್ಲಿ, ಸದರಿ ವಿಚಾರವನ್ನು ಆದ್ಯತೆಯ ಮೇಲೆ ಪರಿಗಣಿಸಿ ತಪ್ಪದೆ ಕೋರಿರುವ ಅಭಿಪ್ರಾಯಗಳ ಮಾಹಿತಿಯನ್ನು ಸಂಗ್ರಹಿಸಿ ವಿಶ್ವವಿದ್ಯಾಲಯಕ್ಕೆ ತಲುಪಿಸುವುದು.

8/6/2020

ಕುಲಸಚಿವರು

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಟಮಕಾ, ಕೋಲಾರ-ಕರ್ನಾಟಕ-563 103

ಗೆ,

ಎಲ್ಲಾ ಕಾಲೇಜು ಪ್ರಾಂಶುಪಾಲರುಗಳು (ಬಿಎಡ್ ಮತ್ತು ಬಿ.ಪಿ.ಎಡ್ ಕಾಲೇಜುಗಳು ಸೇರಿದಂತೆ)
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಪ್ರತಿ:

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-1.
3. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಛೇರಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
4. ಕಛೇರಿ ಪ್ರತಿ.

Scanned by CamScanner